# All India Radio: Bangalore
# National Bulletin In Kannada
# 01.05.2025 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**01.05.2025 1.10 p.m.**

**<><><><>**

ಮುಖ್ಯಾಂಶಗಳು

1. ಮುಂಬೈನಲ್ಲಿ ವೇವ್ಸ್ ಶೃಂಗಸಭೆ ಆರಂಭ ; ಭಾರತದ ಯಶೋಗಾಥೆ ಜಗತ್ತಿನ ಹೃದಯ ಸ್ಪರ್ಶಿಸುತ್ತಿದೆ - ಪ್ರಧಾನಿ ನರೇಂದ್ರ ಮೋದಿ
2. ವೇವ್ಸ್ ಶೃಂಗಸಭೆಯಿಂದ ಹೊಸ ಆರ್ಥಿಕ ಅವಕಾಶಗಳು ಲಭ್ಯ ; – ಸಚಿವ ಅಶ್ವಿನಿ ವೈಷ್ಣವ್
3. ಪಹಲ್ಗಾಮ್ ಭಯೋತ್ಪಾದಕ ದಾಳಿ ; ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಜೊತೆ ಸಚಿವ ಡಾ. ಎಸ್. ಜೈಶಂಕರ್ ಸಮಾಲೋಚನೆ
4. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ರಾಜಸ್ಥಾನ್ ರಾಯಲ್ಸ್-ಮುಂಬೈ ಇಂಡಿಯನ್ಸ್ ಮುಖಾಮುಖಿ

<><><><>

ಭಾರತದ ಯಶೋಗಾಥೆ ಜಗತ್ತಿನ ಪ್ರತಿಯೊಬ್ಬರ ಹೃದಯವನ್ನು ಸ್ಪರ್ಶಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಮುಂಬೈನಲ್ಲಿ ಆರಂಭವಾಗಿರುವ ವೇವ್ಸ್ ಶೃಂಸಭೆಯಲ್ಲಿ ಮಾತನಾಡಿದ ಅವರು, ಭಾರತ ಇಂದು ತನ್ನ ಕ್ರೀಯಾಶೀಲ ಶಕ್ತಿಯನ್ನು ಜಾಗತಿಕ ವೇದಿಕೆಯಲ್ಲಿ ಪ್ರದರ್ಶಿಸಿದೆ. ಭಾರತದಲ್ಲಿ ಶತಮಾನಗಳ ಭವ್ಯ ಕಥಾನಕಗಳ ನಿಧಿಯಿದೆ. ಈ ನಿಧಿಯಿಂದ ಅಮೂಲ್ಯವಾದದ್ದನ್ನು ಹೆಕ್ಕಿ ತೆಗೆದು ಜಗತ್ತಿನ ಪ್ರತಿಯೊಬ್ಬರಿಗೂ ತಲುಪಿಸುವ ಪ್ರಯತ್ನ ನಡೆಯಬೇಕು. ಇದಕ್ಕಾಗಿ ಈ ಸುಸಮಯವನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ಹೇಳಿದರು. ಸಂಗೀತ, ಕ್ರೀಡೆ, ಗೇಮಿಂಗ್ ಸೇರಿದಂತೆ ಪ್ರತಿಯೊಂದು ವಲಯದಲ್ಲೂ ದೇಶದ ಹಳ್ಳಿ ಹಳ್ಳಿಗಳಲ್ಲೂ ಪ್ರತಿಭೆಗಳಿವೆ. ಇಂತಹ ಪ್ರತಿಭಾವಂತರಿಗೆ ಉತ್ತಮ ಅವಕಾಶ ಕಲ್ಪಿಸಬೇಕು. ಜಗತ್ತಿನ ಪ್ರತಿಯೊಂದು ದೇಶದ ಸಂಸ್ಕೃತಿಯನ್ನು ಬೆಸೆಯುವ ಕೆಲಸ ಮಾಡಬೇಕು. 'ಕ್ರಿಯೇಟ್ ಇನ್ ಇಂಡಿಯಾ' ನಮ್ಮ ಘೋಷಣೆಯಾಗಿದೆ. ಭಾರತೀಯ ಸಿನೆಮಾ ಜಗತ್ತಿನ ಮೂಲೆ ಮೂಲೆಗಳಿಗೆ ತಲುಪುತ್ತಿದೆ. ಜಗತ್ತಿನ ಅನಿಮೇಷನ್ ವಲಯ ೪೦೦ ಶತಕೋಟಿ ಡಾಲರ್‌ನಷ್ಟಿದೆ. ಪ್ರತಿಯೊಬ್ಬರು ಭಾರತದಲ್ಲಿ ಸೃಜನಶೀಲತೆಯ ಅಲೆಗಳನ್ನು ಸೃಷ್ಟಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಧ್ವನಿ : ಪ್ರಧಾನಮಂತ್ರಿ ನರೇಂದ್ರ ಮೋದಿ (೨೫ ಸೆಕೆಂಡ್‌ಗಳು)

<><><><>

ವೇವ್ಸ್ ಶೃಂಗಸಭೆಯಿಂದ ಹೊಸ ಆರ್ಥಿಕ ಅವಕಾಶಗಳು ದೊರೆಯಲಿವೆ ಎಂದು ಕೇಂದ್ರ ಸಮಾಚಾರ ಮತ್ತು ಪ್ರಚಾರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಮುಂಬೈನಲ್ಲಿ ಆರಂಭವಾದ ವೇವ್ಸ್

ಶೃಂಗಸಭೆಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಈ ಜಾಗತಿಕ ವೇದಿಕೆ ಸೃಜನಶೀಲರಿಗೆ ಉತ್ತಮ ಅವಕಾಶವನ್ನು ನೀಡುತ್ತಿದ್ದು, ಹೊಸತಂತ್ರಜ್ಞಾನವನ್ನು ಜಗತ್ತಿಗೆ ಪರಿಚಯಿಸಲು ಸಹಕಾರಿಯಾಗಲಿದೆ. ಜಗತ್ತಿನಾದ್ಯಂತ ಇರುವ ಖರೀದಿದಾರರು ಮತ್ತು ಹೂಡಿಕೆದಾರರನ್ನು ಒಂದುಗೂಡಿಸಲು ಇದು ಉತ್ತಮ ಅವಕಾಶವಾಗಿದೆ. ಮುಂಬೈನಲ್ಲಿ ೪೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಕ್ರಿಯೇಟಿವ್ ಟೆಕ್ನಾಲಜಿ ಸಂಸ್ಥೆಯನ್ನು ಸ್ಥಾಪಿಸಲಾಗುವುದು ಎಂದರು.

<><><>

ಪ್ರಧಾನಿ ನರೇಂದ್ರ ಮೋದಿ ೨ ದಿನಗಳ ಬೇಟಿಗಾಗಿ ಇಂದು ಕೇರಳ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿ ಸಂದರ್ಭದಲ್ಲಿ ನಾಳೆ ವಿಜಿಂಜಾಮ್ ಅಂತಾರಾಷ್ಟ್ರೀಯ ಬಂದರು ಲೋಕಾರ್ಪಣೆ ಮಾಡಲಿದ್ದಾರೆ. ಈ ಬಂದರು ಆಳ ಸಮುದ್ರದಲ್ಲಿ ಸರಕು ಸಾಗಾಣೆ ಮಾಡುವ ಅತ್ಯಾಧುನಿಕ ತಂತ್ರಜ್ಞಾನ ಹೊಂದಿದೆ. ಇದು ಭಾರತದ ಬಂದರು ಇತಿಹಾಸದಲ್ಲಿ ಹೊಸ ಆಯಾಮ ಸೃಷ್ಟಿಸಲಿದ್ದು, ಜಾಗತಿಕ ಸಾಗರ ವಲಯದ ಭೂಪಟದಲ್ಲಿ ಕೇರಳ ಪ್ರಮುಖ ತಾಣವಾಗಿ ಹೊರಹೊಮ್ಮುವ ನಿರೀಕ್ಷೆ ಇದೆ. ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಬಂದರು ಕಾರ್ಯಾಚರಣೆ ಮತ್ತು ನಿಯಂತ್ರಣ ವ್ಯವಸ್ಥೆಯನ್ನು ಪರಿಶೀಲಿಸಲಿದ್ದಾರೆ. ಈ ಬಂದರು ಕಾಮಗಾರಿ ಕಳೆದ ಡಿಸೆಂಬರ್ ನಲ್ಲಿ ಪೂರ್ಣಗೊಂಡಿದ್ದು ೩ ತಿಂಗಳಿನಿಂದ ಕಾರ್ಯಾಚರಣೆ ನಡೆಸುತ್ತಿದೆ. ಇದು ಕೇರಳ ಸರ್ಕಾರದ ಕನಸಿನ ಯೋಜನೆಯಾಗಿದೆ. ೩ ದಶಕಗಳ ಪ್ರಯತ್ನದ ಫಲವಾಗಿ ವಿಜಿಂಜಾಮ್ ಬಂದರು ನಿರ್ಮಾಣವಾಗಿದೆ.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿ ಕುರಿತಂತೆ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಇಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರುಬಿಯೊ ಜೊತೆ ದೂರವಾಣಿ ಸಮಾಲೋಚನೆ ನಡೆಸಿದರು. ದಾಳಿಯ ಸಂಚುಕೋರರು, ಬೆಂಬಲಿಸಿರುವವರು ಮತ್ತು ಯೋಜನೆ ರೂಪಿಸಿರುವವರನ್ನು ಪತ್ತೆ ಹಚ್ಚಿ ಶಿಕ್ಷಿಸಬೇಕಾಗಿದೆ ಎಂದು ಪ್ರತಿಪಾದಿಸಿರುವುದಾಗಿ ಡಾ. ಎಸ್. ಜೈಶಂಕರ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

<><><>

ಶ್ರಮಜೀವಿಗಳ ಕೆಲಸವನ್ನು ಗೌರವಿಸುವ ಹಾಗೂ ಅವರ ಕಷ್ಟಗಳನ್ನು ಸ್ಮರಿಸುವ ಸಲುವಾಗಿ ಮೇ ೧ ರಂದು ಜಾಗತಿಕವಾಗಿ 'ಅಂತಾರಾಷ್ಟ್ರೀಯ ಕಾರ್ಮಿಕರ ದಿನವನ್ನಾಗಿ ಆಚರಿಸಲಾಗುತ್ತದೆ. ಕಾರ್ಮಿಕ ವರ್ಗದ ಶ್ರಮ ಮತ್ತು ಸಮರ್ಪಣೆಯನ್ನು ಗುರುತಿಸುವುದು, ಕಾರ್ಮಿಕರ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಶೋಷಣೆಯಿಂದ ರಕ್ಷಿಸುವುದು ಕಾರ್ಮಿಕ ದಿನದ ಉದ್ದೇಶವಾಗಿದೆ. ೧೮೮೬ರಲ್ಲಿ ಅಮೆರಿಕದಲ್ಲಿ ಮೊದಲ ಬಾರಿಗೆ ಕಾರ್ಮಿಕರ ದಿನ ಆಚರಿಸಲಾಯಿತು. ದಿನಕ್ಕೆ ಕಾರ್ಮಿಕರಿಗೆ ೮ ಗಂಟೆ ಕೆಲಸದ ಅವಧಿಯನ್ನು ನಿಗದಿ ಮಾಡಬೇಕು ಎಂಬ ಆಗ್ರಹದೊಂದಿಗೆ ಪ್ರಾರಂಭವಾದ ಚಳವಳಿಗೆ ಯಶಸ್ಸು ಸಿಕ್ಕಿತ್ತು. ಇದೇ ಹೋರಾಟದ ಕಿಚ್ಚಿನಲ್ಲಿ ಉದಯಿಸಿದ್ದೇ ಕಾರ್ಮಿಕರ ದಿನಾಚರಣೆ. ೧೯೨೩ರಲ್ಲಿ ಭಾರತದಲ್ಲಿ ಈ ಆಚರಣೆ ಆರಂಭವಾಗಿದ್ದು, ವಿಶ್ವದ ನಾನಾ ಭಾಗಗಳಲ್ಲಿ ಕಾರ್ಮಿಕರ ದಿನಾಚರಣೆಯನ್ನು ಆಚರಿಸುವ ಮೂಲಕ ಶ್ರಮಜೀವಿಗಳಿಗೆ ಕೃತಜ್ಞತೆ ಸಲ್ಲಿಸಲಾಗುತ್ತದೆ. ಇಂದು

ಸಮಾಜಕ್ಕಾಗಿ ಕಾರ್ಮಿಕರ ಕೊಡುಗೆ ಹಾಗೂ ತ್ಯಾಗವನ್ನು ಸ್ಮರಿಸಲಾಗುತ್ತದೆ. ಭಾರತದಲ್ಲಿ ಮೊದಲ ಕಾರ್ಮಿಕ ದಿನವನ್ನು ಮದ್ರಾಸಿನಲ್ಲಿ ಆಚರಿಸಲಾಯಿತು. ಇದನ್ನು ಕಾಮ್ರೇಡ್ ಸಿಂಗರವೇಲರ್ ನೇತೃತ್ವದ ಲೇಬರ್ ಕಿಸಾನ್ ಪಾರ್ಟಿ ಆಫ್ ಹಿಂದೂಸ್ತಾನ್ ಆರಂಭಿಸಿತ್ತು. ಅಂದಿನಿಂದ ಈವರೆಗೆ ಭಾರತದಲ್ಲಿ ಕಾರ್ಮಿಕರ ದಿನವನ್ನು ಆಚರಿಸಲಾಗುತ್ತಿದೆ.

<><><>

ಮಹಾರಾಷ್ಟ್ರ ಹಾಗೂ ರಾಜಸ್ಥಾನ ರಾಜ್ಯೋದ್ಯವ ದಿನದ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಶುಭಕೋರಿದ್ದಾರೆ. ಮಹಾರಾಷ್ಟ್ರದಲ್ಲಿ ಛತ್ರಪತಿ ಶಿವಾಜಿ ಮಹಾರಾಜ್ ದೇಶಭಕ್ತಿಗೆ ಸದಾ ಸ್ಫೂರ್ತಿಯಾಗಿದ್ದು, ಅನ್ಯಾಯದ ವಿರುದ್ಧ ಹೋರಾಟ ಮಾಡುವ ಮನಸ್ಥಿತಿಯನ್ನು ಅಲ್ಲಿನ ಜನ ಹೊಂದಿರುವುದಾಗಿ ತಿಳಿಸಿದ್ದಾರೆ. ಗುಜರಾತ್ ರಾಜ್ಯ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರಿಗೆ ಜನ್ಮ ನೀಡಿದ ಪುಣ್ಯ ಭೂಮಿ ಎಂದು ರಾಷ್ಟ್ರಪತಿ ಅವರು ಸಾಮಾಜಿಕ ಮಾಧ್ಯಮ ಪೋಸ್ಟ್ ಅಲ್ಲಿ ತಿಳಿಸಿದ್ದಾರೆ.

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಪ್ರಧಾನಿ ನರೇಂದ್ರಮೋದಿ ಮತ್ತಿತ್ತರರು ಕೂಡ ಮಹಾರಾಷ್ಟ್ರ ಹಾಗೂ ಗುಜರಾತ್ ಜನತೆಗೆ ಶುಭಕೋರಿದ್ದಾರೆ.

<><><>

ಜಮ್ಮು ಕಾಶ್ಮೀರದ ಗಡಿ ನಿಯಂತ್ರಣ ರೇಖೆ ಬಳಿ ಪಾಕಿಸ್ತಾನ ನಡೆಸಿದ ಸಣ್ಣ ಗುಂಡಿನ ದಾಳಿಗೆ ಭಾರತೀಯ ಸೇನಾ ಪಡೆಗಳು ಪ್ರತ್ಯುತ್ತರ ನೀಡಿವೆ. ಕುಪ್ವಾರ, ಉರಿ ಹಾಗೂ ಅಖಿನೂರ್ ವಲಯದ ಗಡಿ ನಿಯಂತ್ರಣ ರೇಖೆ ಬಳಿ ಪಾಕಿಸ್ತಾನ ಪಡೆಗಳು ಅಪ್ರಚೋದಿತ ಗುಂಡಿನ ದಾಳಿ ನಡೆಸಿದವು ಎಂದು ರಕ್ಷಣಾ ಇಲಾಖಾ ಮೂಲಗಳು ತಿಳಿಸಿವೆ.

<><><>

ಕೇಂದ್ರ ತನಿಖಾ ದಳವು ಅಂತಾರಾಷ್ಟ್ರೀಯ ಸಂಪರ್ಕ ಹೊಂದಿರುವ ಮಕ್ಕಳ ಆನ್‌ಲೈನ್ ಲೈಂಗಿಕ ಶೋಷಣೆಯ ಸೈಬರ್ ಅಪರಾಧದ ಜಾಲಗಳನ್ನು ಭೇದಿಸಿದೆ. ಅಮೆರಿಕದಿಂದ ಬಂದ ಮಾಹಿತಿ ಆಧಾರದ ಮೇಲೆ ಆರಂಭಿಸಲಾದ ಅಪರೇಷನ್ ಹಾಕ್ ಅಡಿಯಲ್ಲಿ ಸಿಬಿಐ ಈ ಕ್ರಮ ಕೈಗೊಂಡಿದೆ. ಸಿಬಿಐನ ಅಂತಾರಾಷ್ಟ್ರೀಯ ಕಾರ್ಯಾಚರಣೆ ವಿಭಾಗ ದೆಹಲಿ ಮತ್ತು ಕರ್ನಾಟಕದ ಮಂಗಳೂರಿನ ಇಬ್ಬರು ಆರೋಪಿಗಳ ವಿರುದ್ಧ ಭಾರತೀಯ ಕಾನೂನಿನಡಿಯಲ್ಲಿ ಪ್ರಕರಣ ದಾಖಲಿಸಿದೆ ಎಂದು ಸಿಬಿಐ ತನ್ನ ಹೇಳಿಕೆಯಲ್ಲಿ ತಿಳಿಸಿದೆ. ತನಿಖೆ ಸಮಯದಲ್ಲಿ ಆರೋಪಿಗಳು ಸಾಮಾಜಿಕ ಮಾಧ್ಯಮದ ವೇದಿಕೆಯೊಂದರ ಮೂಲಕ ಅಮೆರಿಕದ ಅಪ್ರಾಪ್ತ ಬಾಲಕಿಯರೊಂದಿಗೆ ಆಕ್ಷೇಪಾರ್ಹ ಮಾತುಕತೆಗಳಲ್ಲಿ ಹಾಗೂ ಅಶ್ಲೀಲ ಚಿತ್ರ ಮತ್ತು ವಿಡಿಯೋ ಹಂಚಿಕೆಯಲ್ಲಿ ತೊಡಗಿರುವುದು ಕಂಡು ಬಂದಿದೆ ಎಂದು ಸಿಬಿಐ ತಿಳಿಸಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ತಂಡ ವ್ಯಾಪಕ ಶೋಧ ನಡೆಸಿ ವಿದ್ಯುನ್ಮಾನ ಸಾಧನಗಳನ್ನು ವಶಪಡಿಸಿಕೊಂಡಿದೆ.

<><><>

ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರುದ್ಧ ಕಾಂಗ್ರೆಸ್ ಹುಬ್ಬಳ್ಳಿಯಲ್ಲಿ ಪ್ರತಿಭಟನೆಗೆ ಮುಂದಾಗಿರುವುದು ಸರಿಯಲ್ಲ. ರಾಜ್ಯ ಕಾಂಗ್ರೆಸ್ ಸರ್ಕಾರ ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದೆ ಎಂದು ಕೇಂದ್ರ ಸಚಿವ

ಪ್ರಲ್ಹಾದ್ ಜೋಶಿ ಟೀಕಿಸಿದ್ದಾರೆ. ರಾಜ್ಯದಲ್ಲಿ ಕಸ ವಿಲೇವಾರಿ, ಕುಡಿಯುವ ನೀರಿನಿಂದ ಹಿಡಿದು ೪೮ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಬೆಲೆ ಏರಿಕೆ ಖಂಡಿಸಿ ಕೇಂದ್ರದ ವಿರುದ್ಧ ಪ್ರತಿಭಟನೆ ನಡೆಸಿರುವುದು ಹಾಸ್ಯಾಸ್ಪದ ಎಂದರು.

<><><><>

ರಾಷ್ಟ್ರಪತಿ ಆಳ್ವಿಕೆಯಲ್ಲಿರುವ ಮಣಿಪುರದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಮರು ಸ್ಥಾಪನೆಯಾಗಲು ಉತ್ತಮ ಮತ್ತು ಬಲಿಷ್ಠ ಸರ್ಕಾರ ರಚಿಸುವಂತೆ ೨೧ ಶಾಸಕರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದಿದ್ದಾರೆ. ರಾಷ್ಟ್ರಪತಿ ಆಳ್ವಿಕೆಯಿಂದ ಯಾವುದೇ ಮಹತ್ತರ ಬದಲಾವಣೆ ಆಗಿಲ್ಲ. ಶಾಂತಿ ಸಂಪೂರ್ಣವಾಗಿ ಸ್ಥಾಪನೆಯಾಗಿಲ್ಲ. ಹೀಗಾಗಿ, ಜನಪ್ರಿಯ ಸರ್ಕಾರ ರಚಿಸುವುದು ಅಗತ್ಯ ಎಂದು ಶಾಸಕರು ಪತ್ರದಲ್ಲಿ ಒತ್ತಾಯಿಸಿದ್ದಾರೆ.

<><><><>

ಜೈಪುರದ ಸವಾಯ್ ಮಾನ್ ಸಿಂಗ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಮತ್ತು ಮುಂಬೈ ಇಂಡಿಯನ್ಸ್ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೦೭:೩೦ ಕ್ಕೆ ಆರಂಭವಾಗಲಿದೆ. ಕಳೆದ ಪಂದ್ಯದಲ್ಲಿ ಕೇವಲ ೩೫ ಎಸೆತಗಳಲ್ಲಿ ಭರ್ಜರಿ ಶತಕ ಸಿಡಿಸಿ ಜಾಗತಿಕವಾಗಿ ಗಮನ ಸೆಳೆದ ರಾಜಸ್ಥಾನ್ ರಾಯಲ್ಸ್‌ನ ವೈಭವ್ ಸೂರ್ಯವಂಶಿ ಇಂದಿನ ಪಂದ್ಯದ ಮೆಚ್ಚಿನ ಆಟಗಾರರಾಗಿದ್ದಾರೆ. ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ೪ ವಿಕೆಟ್‌ಗಳಿಂದ ಸೋಲಿಸಿತು.

<><><><>

ಬರುವ ೨೦೨೬ ರ ಏಷ್ಯನ್ ಗೇಮ್ಸ್ ನಲ್ಲಿ ಕ್ರಿಕೆಟ್ ಅನ್ನು ಉಳಿಸಿಕೊಳ್ಳಲಾಗಿದ್ದು, ಮಿಶ್ರ ಮಾರ್ಷಲ್ ಆರ್ಟ್ಸ್ ಕೂಡ ಮೊದಲ ಬಾರಿಗೆ ಕ್ರೀಡಾಕೂಟದಲ್ಲಿ ಪಾದಾರ್ಪಣೆ ಮಾಡಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>